**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 22ನೇ ಏಪ್ರಿಲ್ ತಿಂಗಳು 2026 ರಂದು

**ಸಿಸಿ ನಂ.176/2023**

**ಫಿರ್ಯಾದುದಾರರುಃ** ಶ್ರೀ.ರಾಹುಲ್ ಶಾಲಿಯಾನ.ಎ.ಬಿ., ಬಿನ್ ಬಾಲಕೃಷ್ಣ, ವಯಸ್ಸು ಸುಮಾರು 28 ವರ್ಷ, ವಾಸಃ ಬಿ–ಎಸ್ಟೇಟ್, ಮಾದಪುರ ಗ್ರಾಮ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ.ಪಂಚಾಕ್ಷರಿ, ಬಿನ್ ಲೇಟ್ ಸಿದ್ದಲಿಂಗಪ್ಪ, ವಯಸ್ಸು ಸುಮಾರು 42 ವರ್ಷ, ವಾಸಃ ಹರವೇ ಗ್ರಾಮ ಮತ್ತು ಪೋಸ್ಟ್, ಗಾವಡಗೆರೆ ಹೋಬಳಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಶ್ರೀ.ರಾಹುಲ್ ಶಾಲಿಯಾನ.ಎ.ಬಿ ರವರು ಹಲವು ವರ್ಷಗಳಿಂದ ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ನೀವು ಅವರಿಂದ ಜುಲೈ – 2022ರಂದು ರೂ.3,00,000/–ಗಳನ್ನು ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ಅಂದರೆ ತೆಂಗಿನಕಾಯಿ ವ್ಯಾಪಾರದ ಸಲುವಾಗಿ ಆರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಆರು ತಿಂಗಳ ಒಳಗೆ ಕಳೆದ ನಂತರ ಅವರು ನಿಮ್ಮನ್ನು ಭೇಟಿಯಾಗಿ ಸಾಲವನ್ನು ಮರುಪಾವತಿಸುವಂತೆ ಕೇಳಿದಾಗ ನೀವು ಸದರಿ ಸಾಲದ ಮರುಪಾವತಿಗಾಗಿ ದಿನಾಂಕಃ 06.01.2023 ರಂದು ಪಾವತಿಯಾಗುವಂತೆ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಹುಣಸೂರು ಶಾಖೆಯ ಚೆಕ್ ಸಂಖ್ಯೆ: 108344 ಅನ್ನು ರೂ.3,00,000/–ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಅವರು ತಮ್ಮ ಖಾತೆ ಹೊಂದಿದ ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 07.01.2023ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದುದಾರರು ನಿಮಗೆ ದಿನಾಂಕಃ 17.01.2023 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯ

ಮೂಲಕ ನೋಟೀಸ್ ಕಳುಹಿಸಿದ್ದು, ಸದರಿ ನೋಟೀಸನ್ನು ನೀವು ದಿನಾಂಕಃ 31.01.2023ರಂದು ಪಡೆದುಕೊಂಡಿದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಚೆಕ್ ನಲ್ಲಿ ನಮೂದಿಸಿದ ಹಣವನ್ನಾಗಲಿ ಮತ್ತು ಪ್ರತ್ಯುತ್ತರವನ್ನಾಗಲೀ ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ.138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

Sd/-

(ಅನಿತ)

ANITHA Digitally signed by ANITHA Date: 2026.04.22 18:09:11 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ